**ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂಃ ರವರ ನ್ಯಾಯಾಲಯ, ಕೊಪ್ಪ**

**ಸಿ. ಸಿ. ನಂ.30/2023**

**ಪಿರ್ಯಾಧಿದಾರರುಃ** ಶ್ರೀ ಅಶೋಕ ಹೆಚ್.ಸಿ., ಬಿನ್ ಚನ್ನಪ್ಪಗೌಡ, 50 ವರ್ಷ, ವ್ಯವಸಾಯ ಮತ್ತು ವ್ಯಾಪಾರ, ವಾಸ ಮೇಲಿನಪೇಟೆ, ಕೊಪ್ಪ ಪಟ್ಟಣ ಮತ್ತು ಅಂಚೆ, ಕೊಪ್ಪ ತಾಲ್ಲೂಕು.

-**ವಿರುದ್ಧ** -

**ಆರೋಪಿಃ** ಶ್ರೀ ಫೈರೋಜ್ ಖಾನ್ ಬಿನ್ ಮೆಹಬೂಬ್ ಖಾನ್, ವಯಸ್ಕರು, ವಾಸ ಬೇಟಗೆರೆ, 6 ನೇ ವಾರ್ಡ್, ಎನ್.ಆರ್. ಪುರ ಪಟ್ಟಣ ಮತ್ತು ಅಂಚೆ, ಎನ್.ಆರ್.ಪುರ ತಾಲ್ಲೂಕು.

**ಆರೋಪಣೆ**

ಆರೋಪಿಯಾದ ನೀವು ನಿಮ್ಮ ತುರ್ತು ಅವಶ್ಯಕತೆಗಾಗಿ ಪಿರ್ಯಾಧಿದಾರರಿಂದ 12.06.2022 ರಂದು ರೂ. 2,00,000/- ಗಳ ಕೈ ಸಾಲವನ್ನು ಪಡೆದುಕೊಂಡಿದ್ದು, ಸದರಿ ಸಾಲವನ್ನು ತೀರುವಳಿ ಮಾಡುವ ಸಲುವಾಗಿ ನೀವು ನಿಮ್ಮ ಬಾಬ್ತು ಅವರಿಗೆ ಚೆಕ್ ನಂ. 515908, ದಿನಾಂಕ 12.07.2022 ನ್ನು ನಮೂದಿಸಿದ ಕರ್ನಾಟಕ ಬ್ಯಾಂಕ್ ಲಿಮಿಟೆಡ್, ಎನ್.ಆರ್.ಪುರ ಶಾಖೆಯ ಒಂದು ಚೆಕ್ಕನ್ನು ನೀಡಿದ್ದು, ಅವರು ಸದರಿ ಚೆಕ್ಕನ್ನು ಕರ್ನಾಟಕ ಬ್ಯಾಂಕ್ ಲಿಮಿಟೆಡ್, ಕುದ್ರೆಗುಂಡಿ ಶಾಖೆಗೆ ಹಾಜರುಪಸಿದಾಗ "**Insufficient funds and drawers signature differs**"ಎಂಬ ಹಿಂಬರಹದೊಂದಿಗೆ ನೀವು ಕೊಟ್ಟಂತ ಚೆಕ್ ವಾಪಸ್ಸಾಗಿದ್ದು ಸದರಿ ಚೆಕ್ ಅಮಾನ್ಯಗೊಂಡ ಬಗ್ಗೆ ನಿಮ್ಮ ಗಮನಕ್ಕೆ ದಿನಾಂಕ 20.08.2022 ರಂತೆ ವಕೀಲರ ನೋಟೀಸು ನೀಡಿದ್ದು, ಸದರಿ ನೋಟೀಸು ದಿನಾಂಕ 26.08.2022 ರಂದು “Insufficient Address” ಎಂಬ ಹಿಂಬರಹದೊಂದಿಗೆ ವಾಪಸ್ಸಾಗಿರುತ್ತದೆ. ನೀವು ಚೆಕ್ ಬಾಬ್ತು ಹಣವನ್ನು ನೀಡದೇ ವರ್ಗಾವಣೀಯ ಲಿಖಿತ ಅಧಿನಿಯಮ ಕಲಂ 138 ರ ಅಡಿಯಲ್ಲಿ ಅಪರಾಧವನ್ನು ನನ್ನ ಸಂಜ್ಞೆಯಲ್ಲಿ ಎಸಗಿರುತ್ತೀರಿ.

ಪ್ರಶ್ನೆ 1ಃ- ನಿಮಗೆ ಓದಿ ಹೇಳಿದ ಆರೋಪಣೆ ಅರ್ಥವಾಯಿತೇ?
ಉತ್ತರಃ ತಿಳಿಯಿತು.

ಪ್ರಶ್ನೆ 2ಃ- ಮೇಲಿನ ಆಪಾಧನೆಯನ್ನು ಒಪ್ಪಿಕೊಳ್ಳುತ್ತೀರೋ ಅಥವಾ ವಿಚಾರಣೆಯಾಗಬೇಕೆ?
ಉತ್ತರಃ ವಿಚಾರಣೆಯಾಗಬೇಕು.

ಮೇಲಿನ ಆರೋಪಣೆಯನ್ನು ಆರೋಪಿಗೆ ಓದಿ ಹೇಳಿದ ನಂತರ ಅವರು ನೀಡಿದ ಉತ್ತರವನ್ನು ಸ್ವತಃ ನಾನೇ ಬರೆದುಕೊಂಡಿರುವುದು ನಿಜವೆಂದು ದೃಡೀಕರಿಸುತ್ತೇನೆ.

ದಿನಾಂಕಃ 21.06.2025. ಸಹಿ/- 21.06.2025.

(ಎಂ.ಎನ್. ನಂದಿನಿ)
ಸಿವಿಲ್ ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾ.ದಂ.ರವರ ನ್ಯಾಯಾಲಯ,
ಕೊಪ್ಪ